## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ಇವರಿಗೆ 2015ನೇ ಸಾಲಿನಲ್ಲಿ ಮಕ್ಕಳ ಶಿಕ್ಷಣ ಭತ್ಯೆ ಮಂಜೂರಾತಿ ಬಗ್ಗೆ.

**ಓದಲಾಗಿದೆ:** 1.ಅಧಿಕೃತ ಜ್ಞಾಪನ ಸಂಖ್ಯೆ A 270 12/1/2014 -EStt(Allowance) ದಿನಾಂಕ:28.04.2014.

2.ಪತ್ರ ದಿನಾಂಕ 5.6.2015.

**ಪ್ರಸ್ತಾವನೆ:**

ಕೇಂದ್ರ ನಾಗರಿಕ ಸೇವೆಗೆ ಸೇರಿದ ಅಧಿಕಾರಿಗಳಿಗೆ ವಾರ್ಷಿಕ ಮಕ್ಕಳ ಶಿಕ್ಷಣ ಭತ್ಯೆ ಗರಿಷ್ಠ ರೂ 18,000/- ಗಳನ್ನು ಮರು ಪಾವತಿಸಲು ಮೇಲೆ ಕ್ರಮ ಸಂಖ್ಯೆ.(1) ರಲ್ಲಿ ಓದಲಾದ ಅಧಿಕೃತ ಜ್ಞಾಪನದಲ್ಲಿ ಮಂಜೂರಾತಿ ನೀಡಲಾಗಿದೆ.

ಶ್ರೀಮತಿ ಟಿವಿಷಾ ಚೌಧುರಿ, ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ಇವರು 2015 ನೇ ಸಾಲಿನಲ್ಲಿ ಅವರ ಮಗಳ ಶಿಕ್ಷಣಕ್ಕಾಗಿ ರೂ 53,000/-ಗಳ ಶುಲ್ಕವನ್ನು ಪಾವತಿಸಿದ್ದು, ನಿಯಮಾನುಸಾರ ಲಭ್ಯವಿರುವ ರೂ 18,000/-ಗಳನ್ನು ಮರು ಪಾವತಿಸುವಂತೆ ಕೋರಿ ಶಿಕ್ಷಣ ಶುಲ್ಕ ಪಾವತಿಸಿರುವುದಕ್ಕೆ ರಶೀದಿಯನ್ನು ಸಲ್ಲಿಸಿರುತ್ತಾರೆ. ಪ್ರಸ್ತಾವನೆ ಬಗ್ಗೆ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಪಿಡಿ 19(2) ಎಸ್‌ಪಿಎ 2015 ಬೆಂಗಳೂರು ದಿನಾಂಕ 18.06.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಶ್ರೀಮತಿ ಟಿವಿಷಾ ಚೌಧುರಿ, ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ಇವರಿಗೆ 2015ನೇ ಸಾಲಿನಲ್ಲಿ ಮಕ್ಕಳ ಶಿಕ್ಷಣ ಭತ್ಯೆ ರೂ.18,000/-(ಹದಿನೆಂಟು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ವೆಚ್ಚವನ್ನು ರಾಜ್ಯ ಯೋಜನಾ ಮಂಡಳಿಯ 2015-16ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ'3451-00-101-4-00-014' ಇತರೆ ಖರ್ಚು ಮರುಪಾವತಿ ಲೆಕ್ಕ ಶೀರ್ಷಿಕೆಯಡಿಯಲ್ಲಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ (ಎಸ್-3)
ಯೋಜನೆ,ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಇವರಿಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ,ವಿಧಾನ ಸೌಧ,ಬೆಂಗಳೂರು
3. ಕಾರ್ಯದರ್ಶಿಗಳು, ರಾಜ್ಯ ಯೋಜನಾ ಮಂಡಳಿ, ಬೆಂಗಳೂರು
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
5. ಸರ್ಕಾರದ ಅಧೀನ ಕಾರ್ಯದರ್ಶಿ (ಎಸ್ 1&2) ಯೋಜನೆ ಕಾರ್ಯಕ್ರಮ ಸಂಯೋಜನೆ & ಸಾಂಖ್ಯಿಕ ಇಲಾಖೆ ಬಹುಮಹಡಿ ಕಟ್ಟಡ ಬೆಂಗಳೂರು-01
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು